ಕರ್ನಾಟಕ ಸರ್ಕಾರ
ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12
E-mail : Commissioner.pue@gmail.com. Ph.No. : 23361857, 23361858 Fax : 23361852

**ಸಂಖ್ಯೆ :** ಪಪೂಶಿಇ/ಶೈಶಾ/ಖಾ.ಭಾ.ವಿ.ಅ/2021-22 **ದಿನಾಂಕ :** 13-01-2022

## ಜ್ಞಾಪನ

ವಿಷಯ : ಪದವಿ ಪೂರ್ವ ಶಿಕ್ಷಣದಲ್ಲಿ ಖಾಸಗಿಯಾಗಿ ಭಾಷೆ/ವಿಷಯವನ್ನು (ಫ್ರೆಂಚ್ ಭಾಷೆ ಹಾಗೂ ಪ್ರಾಯೋಗಿಕ ಪರೀಕ್ಷೆ ಇರುವ ವಿಷಯಗಳನ್ನು ಹೊರತುಪಡಿಸಿ) ವ್ಯಾಸಂಗ ಮಾಡಲು ಪ್ರಸ್ತಾವನೆ ಸಲ್ಲಿಸುವ ಬಗ್ಗೆ.

*****

2021-22ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ/ದ್ವಿತೀಯ ಪಿಯುಸಿ ತರಗತಿಗಳಲ್ಲಿ ಕಾಲೇಜಿನಲ್ಲಿ ದಾಖಲಾತಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಖಾಸಗಿಯಾಗಿ ಭಾಷೆ/ವಿಷಯ ವ್ಯಾಸಂಗ ಮಾಡಲು, ಪದವಿ ಪೂರ್ವ ಶಿಕ್ಷಣ ಇಲಾಖೆಯ 2021-22ನೇ ಸಾಲಿನ ದಾಖಲಾತಿ ಮಾರ್ಗಸೂಚಿಯಂತೆ ಅನುಮತಿ ಪಡೆಯಬೇಕಾಗಿರುತ್ತದೆ. ಭಾಷೆ/ವಿಷಯವನ್ನು ಖಾಸಗಿಯಾಗಿ ವ್ಯಾಸಂಗ ಮಾಡಲು ಇಚ್ಚಿಸುವ ವಿದ್ಯಾರ್ಥಿಗಳು ಪ್ರತಿ ವಿಷಯ/ಭಾಷೆಗೆ ನಿಗದಿತ ಶುಲ್ಕ ಪಾವತಿಸಿ ಪೂರಕ ದಾಖಲೆಗಳಾದ ಶುಲ್ಕ ಪಾವತಿಸಿರುವ ಮೂಲ ಚಲನ್ ಹಾಗೂ ವಿದ್ಯಾರ್ಥಿಯ ವಿವರಗಳನ್ನು ಭರ್ತಿಮಾಡಿ ಪ್ರಾಂಶುಪಾಲರಿಗೆ ಸಲ್ಲಿಸುವುದು. ನಂತರ ಪ್ರಾಂಶುಪಾಲರು ಸದರಿ ವಿದ್ಯಾರ್ಥಿಗಳ ಪ್ರಸ್ತಾವನೆಯನ್ನು ಪರಿಶೀಲಿಸಿ ಹಾಗೂ ದೃಢೀಕರಿಸಿ (ಖಾಸಗಿ ಪದವಿ ಪೂರ್ವ ಕಾಲೇಜುಗಳಾಗಿದ್ದಲ್ಲಿ ಮಾನ್ಯತೆ ನವೀಕರಣದ ಪ್ರತಿ ಲಗತ್ತಿಸಬೇಕು) ಜಿಲ್ಲಾ ಉಪ ನಿರ್ದೇಶಕರಿಗೆ ನೀಡಬೇಕು. ಜಿಲ್ಲಾ ಉಪ ನಿರ್ದೇಶಕರು ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಕ್ರೋಢೀಕರಿಸಿ ಇಲಾಖೆಗೆ **ದಿನಾಂಕ : 31.01.2022** ರೊಳಗಾಗಿ ಸಲ್ಲಿಸಲು ಸೂಚಿಸಿದೆ.

ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ

R Kusum
13/01/22
ಜಂಟಿ ನಿರ್ದೇಶಕರು(ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು :

1. ರಾಜ್ಯದ ಎಲ್ಲಾ ಉಪ ನಿರ್ದೇಶಕರುಗಳಿಗೆ, ಪ್ರಾಂಶುಪಾಲರಿಗೆ ಸೂಚನೆ ನೀಡಲು ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಶೈಕ್ಷಣಿಕ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ.
3. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ.
4. ಕಛೇರಿ ಪ್ರತಿ.